**DPARAR/9/AAR/2019-DPARAR TRG-DPAR AR SEC**

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ ಸರ್ಕಾರದ ಅಧಿಕಾರಿಗಳು/ ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ: 08.07.2010.
2. ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ ಇವರ ಪತ್ರ ಸಂಖ್ಯೆ: ಸಿಬ್ಬಂದಿ(1)/04/2019, ದಿನಾಂಕ:19.03.2019.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಅ.ಸ ಪತ್ರ ಸಂಖ್ಯೆ:ಯೋಇ /193/ಪ್ರಕಾ/2019, ದಿನಾಂಕ:09.05.2019.
4. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಅ.ಟಿ. ಸಂಖ್ಯೆ:ಒಇ 19 ಸಶಾಸ 2019, ದಿನಾಂಕ:21.06.2019.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಕಡತ ಸಂಖ್ಯೆ: DME/EH/SNO/ IOT/ 02/19-20.
6. ನಿರ್ದೇಶಕರು, ಕಿದ್ವಾಯಿ ಮೆಮೋರಿಯಲ್ ಇನ್ಸಿಟ್ಯೂಟ್ ಆಫ್ ಅಂಕಾಲಜಿ, ಬೆಂಗಳೂರು ರವರ ಪತ್ರ ಸಂಖ್ಯೆ: KMIO/COMP/06/2019, 25.07.2019.
7. ಆಯುಕ್ತರು, ಬಿಬಿಎಂಪಿ, ರವರ ಪತ್ರ ಸಂಖ್ಯೆ: Commissioner/PR3689/2019-20, ದಿನಾಂಕ: 23.10.2019.
8. ಯೋಜನಾ ಇಲಾಖೆಯ ಕಡತ ಸಂಖ್ಯೆ:ಯೋಇ/01/ಪಿಎಸ್ ಡಿ/2019.
9. ದಿನಾಂಕ:16.10.2019 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ಜರುಗಿದ ಸಭೆಯ ನಡವಳಿ.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಸಂ. (1)ರಲ್ಲಿರುವ ಸರ್ಕಾರದ ಆದೇಶದಲ್ಲಿ, ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ ಸರ್ಕಾರದ ಅಧಿಕಾರಿಗಳು/ ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ / ವಿನೂತನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿ, ಪ್ರತಿ ವರ್ಷದ ಆಯವ್ಯಯದಲ್ಲಿ ಬೇಡಿಕೆಗನುಗುಣವಾಗಿ ಒಂದು ಮೊತ್ತದ ಅನುದಾನವನ್ನು ಹಂಚಿಕೆ ಮಾಡುವ ಕ್ರಮವಿರುತ್ತದೆ. ಈ ಯೋಜನೆಗೆ ಸರ್ಕಾರವು 2019-20ನೇ ಸಾಲಿಗೆ ರೂ.300.00 ಲಕ್ಷಗಳನ್ನು ಮೀಸಲಿರಿಸಿದೆ.

ಮೇಲೆ ಓದಲಾದ ಕ್ರಸಂ. (2)ರಲ್ಲಿರುವ ಪತ್ರದಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿನ ಪೊಲೀಸ್ ಇಲಾಖೆಯ ಕಚೇರಿಗಳಲ್ಲಿ ಇ-ಆಫೀಸ್ ಯೋಜನೆಯನ್ನು ಅನುಷ್ಠಾನಕ್ಕೆ ತರುವ ಉದ್ದೇಶದಿಂದ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಅನುದಾನ ಒದಗಿಸುವಂತೆ ಜಿಲ್ಲಾ ಪೊಲೀಸ್ ಅಧೀಕ್ಷಕರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಸಂ.(3)ರಲ್ಲಿರುವ ಅ.ಸ. ಪತ್ರದಲ್ಲಿ ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಮುದ್ದಯ್ಯನಪಾಳ್ಯ ಗ್ರಾಮದಲ್ಲಿ ಮಳೆನೀರು ಹಾಗೂ ಬಳಸಿದ ನೀರನ್ನು ಸಂಗ್ರಹಿಸಲು ವಾಟರ್ ಲೀಟರ್ಸ್ ಫೌಂಡೇಷನ್ ಮೂಲಕ ಒಂದು ಪ್ರಾಯೋಗಿಕ ಯೋಜನೆಯನ್ನು ಕೈಗೊಳ್ಳುವ ಸಲುವಾಗಿ ಚಾಲೆಂಜ್ ಫಂಡ್ ನಿಂದ ರೂ.30,70,201.00ಗಳ ಅನುದಾನ ಒದಗಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಸಂ. (4)ರಲ್ಲಿರುವ ಒಳಾಡಳಿತ ಇಲಾಖೆಯ ಅ.ಟಿ. ಮುಖೇನ ಡೈರೆಕ್ಟರ್ ಜನರಲ್ ಮತ್ತು ಇನ್ಸ್ ಪೆಕ್ಟರ್ ಜನರಲ್ ಆಫ್ ಪೊಲೀಸ್ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಲಗತ್ತಿಸುತ್ತಾ, ಪೊಲೀಸ್ ಇಲಾಖೆಯಲ್ಲಿ ಕೃತಕ ಬುದ್ಧಿಮತೆಯನ್ನು (AI) ಬಳಸಿಕೊಂಡು ಸಾರ್ವಜನಿಕ ಅಹವಾಲುಗಳಿಗೆ ಪರಿಣಾಮಕಾರಿಯಾಗಿ ಉತ್ತರಿಸಲು CHATBOT ಯೋಜನೆಯನ್ನು ಜಾರಿಗೆ ತರಲು ಉದ್ದೇಶಿಸಿದ್ದು, ಇದಕ್ಕಾಗಿ ರೂ.58.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಸಂ. (5)ರಲ್ಲಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆಯವರು ಪ್ರಯೋಗಾಲಯಗಳಲ್ಲಿ ಪರೀಕ್ಷಿಸಿದ ವಿವಿಧ ಮಾದರಿಗಳ ವರದಿಗಳನ್ನು ವೈದ್ಯರಿಗೆ ತಲುಪಿಸಲು ಹಲವು ಹಂತಗಳನ್ನು ದಾಟಬೇಕಾಗಿದ್ದು, ಈ ಹಂತಗಳಲ್ಲಿ ಆಗುವ ಹಲವು ತಪ್ಪುಗಳು ಮತ್ತು ಮಾನವ ಶ್ರಮವನ್ನು ನಿಗ್ರಹಿಸುವ ಸಂಬಂಧ ಹಾಗೂ ಈ ಮೂಲಕ ವೈದ್ಯರಿಗೆ ತುರ್ತಾಗಿ ಹಾಗೂ ಖರಾರುವಕ್ಕಾದ ಮಾಹಿತಿಯನ್ನು ತಲುಪಿಸಲು IOT based Monitoring and Laboratory equipment interfacing with e-hospital at Medical Education Institution ಎಂಬ ಪ್ರಯೋಗಿಕ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಿದ್ದು, ಇದ್ದಕಾಗಿ ರೂ.1,93,07,500-00 ಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಸಂ. (6)ರಲ್ಲಿ ನಿರ್ದೇಶಕರು, ಕಿದ್ವಾಯಿ ಮೆಮೊರಿಯಲ್ ಇನ್ಸ್ಟಿಟ್ಯೂಟ್ ಆಫ್ ಅಂಕಾಲಜಿ, ಬೆಂಗಳೂರು ಇವರು ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ (ICT) ಕ್ಕೆ ಇ-ಆಸ್ಪತ್ರೆ ಅಳವಡಿಸಿಕೊಳ್ಳುವ ಮೂಲಕ ಸೇವೆಯನ್ನು ಉನ್ನತೀಕರಿಸಲು ಬಯಸಿದ್ದು, ಇದಕ್ಕಾಗಿ Picture Arachival & Communication System (PACS), Radiology Information System (RIS) ಯೋಜನೆಗಾಗಿ ರೂ.200.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ. ಸಂ. (7) ರಲ್ಲಿರುವ ಪತ್ರದಲ್ಲಿ ಆಯುಕ್ತರು, ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ ರವರು ತ್ಯಾಜ್ಯ ನಿರ್ವಹಣೆಗಾಗಿ TrashBot ತಂತ್ರಜ್ಞಾನದಿಂದ ತಯಾರಿಸಿರುವ ಯಂತ್ರಗಳಿಂದ ಘನತ್ಯಾಜ್ಯವನ್ನು ಜೈವಿಕ ಮತ್ತು ಜೈವಿಕೇತರವಾಗಿ ಬೇರ್ಪಡಿಸಿ, ಮರುಬಳಕೆ ಮಾಡಬಹುದು. ಇದರಿಂದ ಬೆಂಗಳೂರು ನಗರದಲ್ಲಿ ಕಸ ಮುಕ್ತ ವಾತಾವರಣ ಸೃಷ್ಟಿಸಲು ಸಹಕಾರಿಯಾಗುತ್ತದೆಂದು ತಿಳಿಸುತ್ತಾ, ಸದರಿ ಯಂತ್ರಗಳನ್ನು ಖರೀದಿಸುವ ಸಲುವಾಗಿ ರೂ.60.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ. ಸಂ. (8)ರಲ್ಲಿರುವ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರು Karnataka State Data Hub ಸ್ಥಾಪಿಸುವ ಸಲುವಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಸಂ. (9)ರಲ್ಲಿರುವ ನಡವಳಿಯಲ್ಲಿ ಚಾಲೆಂಜ್ ಫಂಡ್ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:16.10.2019 ರಂದು ನಡೆದ ಸಭೆಯಲ್ಲಿ ಮೇಲೆ ವಿವರಿಸಿದ ಎಲ್ಲಾ ಪ್ರಸ್ತಾವನೆಗಳನ್ನು ಪರಿಶೀಲಿಸಿ, 2019-20ರ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಕೆಳಕಂಡ ಯೋಜನೆಗಳಿಗೆ ಕೆಲವು ಷರತ್ತುಗಳೊಂದಿಗೆ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಿದೆ.

| ಕ್ರ. ಸಂ. | ಯೋಜನೆಯ ಹೆಸರು | ಅನುದಾನ ಹಂಚಿಕೆಗೆ ಒಪ್ಪಿರುವ ಮೊತ್ತ (ರೂ. ಗಳಲ್ಲಿ) |
|---|---|---|
| 1 | IOT based Monitoring and Laboratory equipment interfacing with e-hospital at Medical Education Institutions. (ವೈದ್ಯಕೀಯ ಶಿಕ್ಷಣ ಇಲಾಖೆ) | 1,93,07,500/- |
| 2 | Picture Archival & Communication System(PACS), Radiology Information System (RIS) (ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಬೆಂಗಳೂರು). | 1,44,00,000/- |
| 3 | Trashcon (BBMP) | 60,00,000/- |
| 4 | CHATBOT (ಪೊಲೀಸ್ ಇಲಾಖೆ) | 20,00,000 /- |
| | ಒಟ್ಟು | 4,17,07,500/- |

2019-20ನೇ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ರೂ.300.00 ಲಕ್ಷಗಳನ್ನು ಒದಗಿಸಲಾಗಿದ್ದು, ಈ ನಾಲ್ಕು ಯೋಜನೆಗಳಿಗೆ ಒಟ್ಟು ರೂ.4,17,07,500.00 ವೆಚ್ಚವಾಗಲಿದೆ.

ಮೇಲಿನ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 9 ಇಆಸು 2019**

**ಬೆಂಗಳೂರು, ದಿನಾಂಕ:30.11.2019.**

ಪ್ರಸ್ತಾವನೆಗಳಲ್ಲಿ ವಿವರಿಸಿರುವಂತೆ, ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಸರ್ಕಾರದ ಅಧಿಕಾರಿ/ಸಿಬ್ಬಂದಿ/ ಸರ್ಕಾರದ ಅಧಿಕಾರಿಗಳು/ ಸಿಬ್ಬಂದಿಗಳ ಗುಂಪು ಮತ್ತು ಸರ್ಕಾರದ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಸಲುವಾಗಿ ಜಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. 2019-20ನೇ ಸಾಲಿಗೆ ಚಾಲೆಂಜ್ ಫಂಡ್ ಯೋಜನೆಯಡಿಯಲ್ಲಿ ಕೆಳಕಂಡ 4 ಯೋಜನೆಗಳಿಗೆ ಷರತ್ತಿಗೊಳಪಟ್ಟು ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದೆ. 2019-20ರ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ಕೆಳಗೆ ವಿವರಿಸಿದಂತೆ ಅನುದಾನ ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

| ಕ್ರ. ಸಂ. | ಯೋಜನೆಯ ಹೆಸರು | ಯೋಜನೆಗೆ ಮಂಜೂರಾದ ಒಟ್ಟು ಅನುದಾನ ಮೊತ್ತ (ರೂ. ಗಳಲ್ಲಿ) | 2019-20ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತ (ರೂ. ಗಳಲ್ಲಿ) |
|---|---|---|---|
| 1 | IOT based Monitoring and Laboratory equipment interfacing with e-hospital at Medical Education Institutions. (ವೈದ್ಯಕೀಯ ಶಿಕ್ಷಣ ಇಲಾಖೆ) | 1,93,07,500/- | 1,38,87,000/- |
| 2 | Picture Archival & Communication System (PACS), Radiology Information System (RIS) (ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಬೆಂಗಳೂರು) | 1,44,00,000 /- | 1,03,59,000/- |
| 3 | Trashcon (BBMP) | 60,00,000/- | 43,14,000/- |
| 4 | CHATBOT (ಪೊಲೀಸ್ ಇಲಾಖೆ) | 20,00,000 /- | 14,40,000/- |
| | **ಒಟ್ಟು** | **4,17,07,500/-** | **3,00,00,000/-** |

ಯೋಜನೆ ನಿರ್ವಹಿಸುವ ಅಧಿಕಾರಿಯು ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ, ಬಿಡುಗಡೆಯಾದ ಅನುದಾನವನ್ನು ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಪ್ರಸ್ತುತ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಅನುಸರಿಸಿ, ಸದರಿ ಯೋಜನೆಯನ್ನು ಜಾರಿಗೊಳಿಸತಕ್ಕದ್ದು.

ಯೋಜನೆಯ ಪುನರಾವರ್ತಿತ ಖರ್ಚುಗಳನ್ನು ತಮ್ಮದೇ ಸಂಪನ್ಮೂಲದಿಂದ ಅಥವಾ ಸರ್ಕಾರ ಆಯ್ಯವ್ಯಯ ಒದಗಿಸಿರುವ ಅನುದಾನ ಮಿತಿಯೊಳಗೆ ಭರಿಸತಕ್ಕದ್ದು.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2052-00-090-0-25-059 (ಯೋಜನೇತರ) ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ.) ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರೈಸಿದ ನಂತರ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಿಂದ ಮೌಲ್ಯಮಾಪನ ಮಾಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫಪಿ 2017, ದಿನಾಂಕ: 05.04.2017 ಮತ್ತು ಸಂಖ್ಯೆ:ಆಇ 05 ಟಿಎಫ್ ಪಿ 2017, ದಿನಾಂಕ:01.01.2018ರಲ್ಲಿ ಆಡಳಿತ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ,

N. S. Gayathri Devi 30/11/2019
(ಎನ್.ಎಸ್. ಗಾಯತ್ರಿದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ - ತರಬೇತಿ)

ಪ್ರತಿ:

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಡೈರೆಕ್ಟರ್ ಜನರಲ್ ಮತ್ತು ಇನ್ಸ್ ಪೆಕ್ಟರ್ ಜನರಲ್ ಆಫ್ ಪೊಲೀಸ್, ನೃಪತುಂಗ ರಸ್ತೆ, ಬೆಂಗಳೂರು.
6. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
7. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ಸರ್ಕಲ್, ಬೆಂಗಳೂರು.
8. ನಿರ್ದೇಶಕರು, ಕಿದ್ವಾಯಿ ಮೆಮೊರಿಯಲ್ ಇನ್ಸ್ಟಿಟ್ಯೂಟ್ ಆಫ್ ಅಂಕಾಲಜಿ, ಹೊಸೂರು ರಸ್ತೆ, ಬೆಂಗಳೂರು
9. ಆಯುಕ್ತರು,ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ, ಬೆಂಗಳೂರು.
10. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ(ಆಸು) ರವರ ಆಪ್ತ ಕಾರ್ಯದರ್ಶಿ.
12. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.